ಅಧ್ಯಕ್ಷರು : ಅನುಬಂಧ –I ವಿಧೇಯಕವನ್ನು ಮಂಡಿಸಲಾಗಿದೆ.

ಆ) ಪರ್ಯಾಲೋಚನಾ ಪ್ರಸ್ತಾಪ ಹಾಗೂ ಅಂಗೀಕಾರ

(1) ಕರ್ನಾಟಕ ಧನವಿನಿಯೋಗ (ಸಂಖ್ಯೆ 3) ವಿಧೇಯಕ, 2003

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) : "2003ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 3) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವ ಮಂಡಿಸಲ್ಪಟ್ಟಿತು.

ಅಧ್ಯಕ್ಷರು : ಈಗ ಪರ್ಯಾಲೋಚನಾ ಪ್ರಸ್ತಾವವನ್ನು ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ "2003ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 3) ವಿಧೇಯಕವನ್ನು ಪರ್ಯಾಲೋಚಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;– "ಖಂಡ 2 ಮತ್ತು 3, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3, ಎರಡೂ ಸೇರಿದಂತೆ, ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, "2003ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 3) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2003ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 3) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

(2) ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕ, 2003

ಪರ್ಯಾಲೋಚನಾ ಪ್ರಸ್ತಾವ